3 ನೇ ಅಧಿಕ ಜಿಲ್ಲಾ ಮತ್ತು ಸತ್ರ ನ್ಯಾಯಾಲಯದಲ್ಲಿ , ತುಮಕೂರು

**Spl.C. No.158/2021**

ಪ್ರಾಸಾ 8

ಚಾಸಾ 18

| | |
|---|---|
| ಹೆಸರು | ಲಕ್ಷ್ಮೀಕಾಂತ.ಜಿ |
| ತಂದೆಯ ಹೆಸರು | ನರಸೇಗೌಡ |
| ವಯಸ್ಸು | 53 ವರ್ಷ |
| ಉದ್ಯೋಗ | ವ್ಯವಸಾಯ |
| ವಾಸಸ್ಥಳ | ಗೂಲಹಳ್ಳಿ |

ಸಾಕ್ಷಿಯನ್ನು ದಿನಾಂಕ 10.02.2026 ರಂದು ಕರೆಸಿ ಪ್ರಮಾಣೀಕರಿಸಲಾಯ್ತು.

**ಮುಖ್ಯ ವಿಚಾರಣೆಃ ಮಾನ್ಯ ಸರ್ಕಾರಿ ಅಭಿಯೋಜಕರವರಿಂದಃ**

1) ಈಗ ನನಗೆ ತೋರಿಸಿದ ದಾಖಲಾತಿಯಲ್ಲಿ ನನ್ನ ಸಹಿ ಇರುತ್ತದೆ. ಸದರಿ ದಾಖಲಾತಿಯು ಅಮಾನತ್ತು ಪಂಚನಾಮೆ ಆಗಿದ್ದು ಅದನ್ನು ನಿಪಿ.9 ಎಂದು, ಸಾಕ್ಷಿಯ ಸಹಿಯನ್ನು ನಿಪಿ.9(ಎ) ಎಂದು ಗುರುತಿಸಲಾಯಿತು. ಸದರಿ ಸಹಿಯನ್ನು ನಾನು 4 – 5 ವರ್ಷಗಳ ಹಿಂದೆ ಗೂಲಹಳ್ಳಿ ಗ್ರಾಮದಲ್ಲಿ ಮಾಡಿರುತ್ತೇನೆ. ಅಲ್ಲಿಗೆ ಪೊಲೀಸರು ಮಹಜರ್ ಗೆ ಬಂದಿದ್ದರು. ನನ್ನೊಂದಿಗೆ ಹನುಮಂತರಾಯಪ್ಪರವರು ಸಹಿ ಮಾಡಿರುತ್ತಾರೆ. ನನ್ನನ್ನು ಡಿವೈಎಸ್‌ಪಿರವರ ಕಚೇರಿಗೆ ಕರೆಸಿರುವುದಿಲ್ಲ.

(ಈ ಹಂತದಲ್ಲಿ ಈ ಸಾಕ್ಷಿಯು ಈ ಹಿಂದೆ ತನಿಖಾಧಿಕಾರಿಯವರು ಮಾಡಿದ ಪಂಚನಾಮೆಗೆ ವಿರೋಧಾತ್ಮಕವಾಗಿ ಸಾಕ್ಷ್ಯ ನುಡಿದಿರುವುದರಿಂದ ಪ್ರತಿಕೂಲ ಪಕ್ಷಕಾರರು ತನ್ನ ಪಾಟೀ ಸವಾಲಿನಲ್ಲಿ ಕೇಳಬಹುದಾದ ಪ್ರಶ್ನೆಗಳನ್ನು ಈ ಸಾಕ್ಷಿಗೆ ಕೇಳಲು ಅನುಮತಿ ನೀಡಬೇಕೆಂದು ಸರ್ಕಾರಿ ಅಭಿಯೋಜಕರು ಭಿನ್ನವಿಸಿರುತ್ತಾರೆ. ಈ ಪ್ರಕರಣದ ಕಾಗದ ಪತ್ರಗಳನ್ನು ಪರಿಶೀಲಿಸಿದಾಗ ಈ

ಸಾಕ್ಷಿಯು ತನ್ನ ಹಿಂದಿನ ಹೇಳಿಕೆಗೆ ವಿರೋಧಾತ್ಮಕವಾಗಿ ಸಾಕ್ಷ್ಯ ನುಡಿದಿರುವುದು ಕಂಡು ಬರುತ್ತದೆ. ಆದ್ದರಿಂದ ಪ್ರತಿಕೂಲ ಪಕ್ಷಕಾರನು ತನ್ನ ಪಾಟೀಸವಾಲಿನಲ್ಲಿ ಕೇಳಬಹುದಾದ ಪ್ರಶ್ನೆಗಳನ್ನು ಈ ಸಾಕ್ಷಿಗೆ ಕೇಳಲು ಅಭಿಯೋಜನೆಗೆ ಅನುಮತಿ ನೀಡುವುದು ಸೂಕ್ತ ಮತ್ತು ನ್ಯಾಯೋಚಿತ ಎಂದು ಮನಗಂಡು ಅನುಮತಿ ನೀಡಲಾಯಿತು)

**ಪಾಟೀಸವಾಲು: ಸರ್ಕಾರಿ ಅಭಿಯೋಜಕರವರಿಂದಃ**

2) ದಿನಾಂಕಃ 13.12.2019 ರಂದು ನನ್ನನ್ನು ಮತ್ತು ಹನುಮಂತರಾಯಪ್ಪರವರನ್ನು ಮಧುಗಿರಿ ಡಿವೈಎಸ್‌ಪಿರವರ ಕಚೇರಿಗೆ ಕರೆಸಿ ಮೃತ ಸಂಜೀವರಾಯಪ್ಪರವರ ಬಾಬತ್ತು ಹಿಂದಿನ ಬರಹದ ದಾಖಲೆಗಳನ್ನು ಮಿಡಿಗೇಶಿ ಪೋಲೀಸ್ ಠಾಣೆಯ ಸಿಬ್ಬಂದಿಯಾದ ಸಂಜೀವರಾಜುರವರು ಯಲ್ಲೂರು ಗ್ರಾಮದ ವಿಶ್ವ ಭಾರತಿ ಶಾಲೆಯಿಂದ ಪಡೆದುಕೊಂಡು ನಮ್ಮ ಸಮಕ್ಷಮ ಹಾಜರುಪಡಿಸಿದ್ದು ಅವುಗಳನ್ನು ಡಿವೈಎಸ್‌ಪಿರವರು ನಮ್ಮ ಸಮಕ್ಷಮ ವಶಕ್ಕೆ ತೆಗೆದುಕೊಂಡು ನಿಪಿ.9 ರಂತೆ ಅಮಾನತ್ತು ಪಂಚನಾಮೆಯನ್ನು ಮಾಡಿಕೊಂಡಿರುತ್ತಾರೆ ಎಂದರೆ ಸರಿಯಲ್ಲ. 2 ಮತ್ತು 3 ನೇ ಆರೋಪಿತರು ನಮ್ಮ ಜನಾಂಗದವರಾಗಿರುವುದರಿಂದ ಅವರಿಗೆ ಸಹಾಯ ಮಾಡುವ ಸಲುವಾಗಿ ನಾನು ಸುಳ್ಳು ಸಾಕ್ಷಿ ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ.

**ಪಾಟೀಸವಾಲುಃ ಆರೋಪಿ ಪರ ಶ್ರೀ.B.K.P.S. ವಕೀಲರಿಂದ : ಇರುವುದಿಲ್ಲ.**

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದಂತೆ ಬೆರಳಚ್ಚು ಮಾಡಲಾಯಿತು)

ಓ ಹೇ ಕೇ ಸಾ ಸ ಇ ಎ ಒ

3 ನೇ ಅಧಿಕ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು,
ತುಮಕೂರು.

ಸಾಕ್ಷಿಯ ಸಹಿ